## ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: | 297 |
| ಸದಸ್ಯರ ಹೆಸರು | ಶ್ರೀ. ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕಃ | 09.12.2020 |
| ಉತ್ತರಿಸುವ ಸಚಿವರು: | ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಇಲಾಖೆ |

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ಮಂಡ್ಯ ಜಿಲ್ಲೆ ಮದ್ದೂರು ತಾಲ್ಲೂಕು ಮದ್ದೂರು – ಕೊಪ್ಪ ಮುಖ್ಯ ರಸ್ತೆಯಿಂದ ಡಿ.ಹೊಸಹಳ್ಳಿ ಮಾರ್ಗವಾಗಿ ಬಿದರಕೋಟೆ ಸೇರುವ ರಸ್ತೆಗೆ ಲೆಕ್ಕಶೀರ್ಷಿಕೆ 5054 ಅಡಿಯಲ್ಲಿ ಡಾಂಬರೀಕರಣ / ರಸ್ತೆ ಅಭಿವೃದ್ಧಿ ಕಾಮಗಾರಿ ಕೈಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು, ಸರ್ಕಾರದ ಗಮನಕ್ಕೆ ಬಂದಿದೆ<br><br>ಮದ್ದೂರು ತಾಲ್ಲೂಕು ಮದ್ದೂರು – ಕೊಪ್ಪ ಮುಖ್ಯ ರಸ್ತೆಯಿಂದ ಡಿ.ಹೊಸಹಳ್ಳಿ ಮಾರ್ಗವಾಗಿ ಬಿದರಕೋಟೆ ಸೇರುವ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು 2017–18ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ 5054–ಜಿಲ್ಲಾ ಮುಖ್ಯ ರಸ್ತೆಗಳು ಅಡಿಯಲ್ಲಿ ರೂ.300.00 ಲಕ್ಷಗಳ ಅಂದಾಜು ಮೊತ್ತದಲ್ಲಿ ಟೆಂಡರ್ ಮುಖಾಂತರ ಕೈಗೊಳ್ಳಲಾಗಿದೆ. |
| ಆ | ಸದರಿ ರಸ್ತೆಗೆ ಡಾಂಬರೀಕರಣ / ರಸ್ತೆ ಅಭಿವೃದ್ಧಿ ಕಾಮಗಾರಿ ಮಾಡುವ ಸಂದರ್ಭದಲ್ಲಿ ಡಿ.ಹೊಸಹಳ್ಳಿಯಲ್ಲಿ ಎರಡು ಸೇತುವೆಗಳನ್ನು ನಿರ್ಮಿಸದಿರುವುದರಿಂದ ಅಪಘಾತಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸೇತುವೆಗಳನ್ನು ಯಾವಾಗ ನಿರ್ಮಿಸಲಾಗುವುದು. | ಸದರಿ ರಸ್ತೆಯ ಗ್ರಾಮಪರಿಮಿತಿಯಲ್ಲಿ ಕಾಂಕ್ರೀಟ್ ಚರಂಡಿ ಹಾಗೂ 3 ಸೇತುವೆಗಳ ನಿರ್ಮಾಣ ಮಾಡಬೇಕಾಗಿದ್ದು, ಅನುಮೋದಿತ ಅಂದಾಜು ಪಟ್ಟಿಯಲ್ಲಿ ಸೇತುವೆಗಳ ನಿರ್ಮಾಣ ಹೊರತುಪಡಿಸಿ ರಸ್ತೆ ಅಭಿವೃದ್ಧಿಯನ್ನು ರೂ.300.00 ಲಕ್ಷಗಳ ಅಂದಾಜು ಮೊತ್ತದಲ್ಲಿ ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗಿರುತ್ತದೆ. ಸೇತುವೆಗಳ ನಿರ್ಮಾಣಕ್ಕೆ ಅನುದಾನದ ಕೊರತೆಯಿರುವುದರಿಂದ ಈ ಕಾಮಗಾರಿಯನ್ನು ಕೈಗೆತ್ತಿಕೊಂಡಿರುವುದಿಲ್ಲ. |
| ಇ | ಸದರಿ ರಸ್ತಗೆ ಡಾಂಬರೀಕರಣ / ರಸ್ತೆ ಅಭಿವೃದ್ಧಿ ಕಾಮಗಾರಿ ಮಾಡುವ ಸಂದರ್ಭದಲ್ಲಿ ಗ್ರಾಮದ ಪರಿಮಿತಿಯಲ್ಲಿ ರಸ್ತೆಯ ಇಕ್ಕೆಲಗಳಲ್ಲಿ ಚರಂಡಿಯನ್ನು ನಿರ್ಮಿಸದಿರುವುದರಿಂದ ಕೊಳಚೆ ನೀರು ರಸ್ತೆಗೆ ಬಂದು ರಸ್ತೆಗಳು ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಯಾವಾಗ ಚರಂಡಿಗಳನ್ನು ನಿರ್ಮಿಸಲಾಗುವುದು ? (ಮಾಹಿತಿ ನೀಡುವುದು) | ಈಗಾಗಲೆ ಕಾಮಗಾರಿಯನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಿರುವ ಅಂದಾಜು ಪಟ್ಟಿಯಲ್ಲಿ ಇಕ್ಕೆಲಗಳಲ್ಲಿ ಚರಂಡಿ ನಿರ್ಮಾಣ, ಸೇತುವೆ ನಿರ್ಮಾಣದ ಅವಕಾಶ ಇಲ್ಲದಿರುವುದರಿಂದ ಚರಂಡಿ ಮತ್ತು ಸೇತುವೆಗಳನ್ನು ನಿರ್ಮಿಸಿರುವುದಿಲ್ಲ. ಮುಂದಿನ ಸಾಲಿನಲ್ಲಿ ಅನುದಾನದ ಲಭ್ಯತೆಯನುಸಾರ ಚರಂಡಿ ಮತ್ತು ಸೇತುವೆ ನಿರ್ಮಾಣ ಕಾಮಗಾರಿ ಕುರಿತು ತೀರ್ಮಾನಿಸಲಾಗುವುದು. |

ಲೋಇ 114 ಸಿಕ್ಯೂಎನ್ 2020(ಇ)

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯಮಂತ್ರಿಗಳು,
ಲೋಕೋಪಯೋಗಿ ಇಲಾಖೆ